# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

ಕನ್ನಡ ದಿನಪತ್ರಿಕೆ

ಹಾಸನ  E-mail : kannadapostnews@gmail.com  / ಕನ್ನಡ post  Price: ₹1

Vol.No.02 | Issue. 123 | Pages. 2 | Date: 17-04-2026, FRIDAY  RNI NO: KARKAN/2024/89601  Kannada Daily

ಸಂಪುಟ : 02 – ಸಂಚಿಕೆ : 123 – ಪುಟಗಳು : 2  17-04-2026  ಶುಕ್ರವಾರ  Ph: 8762954248  ದರ : ₹1


# ಕಾವಾಡಿಗೆ ತಿವಿದ ಪಳಗಿದ ಆನೆ ಸುಗ್ರೀವ

## ರಾಜು ಎಂಬುವರ ಸ್ಥಿತಿ ಗಂಭೀರ: ಪುಂಡಾನೆ ಸೆರೆ ಕಾರ್ಯಾಚರಣೆಗೆ ನಾನಾ ವಿಘ್ನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ರೈತನನ್ನು ಬಲಿ ಪಡೆದಿದ್ದ ನರಹಂತಕ ಒಂಟಿ ಕೋರೆ ಕಾಡಾನೆ ಸೆರೆ ಕಾರ್ಯಾಚರಣೆಗೆ ವಿಘ್ನ ಮುಂದುವರಿದಿದೆ. ಬುಧವಾರ ಇನ್ನೇನು ನರಹಂತಕ ಆನೆ ಸೆರೆಯಾಗಿಯೇ ಬಿಟ್ಟಿತು. ಸ್ಥಳಾಂತರ ಮಾಡೋದು ಬಾಕಿ ಎನ್ನುವಾಗಲೇ ಕಡೇ ಕ್ಷಣದಲ್ಲಿ ಚಳ್ಳೆಹಣ್ಣು ತಿನ್ನಿಸಿ ಪುಂಡಾನೆ ಎಸ್ಕೇಪ್ ಆಗಿತ್ತು.

ಅಧಿಕಾರಿಗಳು-ಸಿಬ್ಬಂದಿ ಹಾಗೂ ಪಳಗಿದ ಆನೆಗಳ ಕಣ್ತಪ್ಪಿಸಿ ಕಾಡು ಸೇರಿರುವ ನರಹಂತಕ ಆನೆಯನ್ನು ಇಂದು ಸೆರೆ ಹಿಡಿಯಲೇ ಬೇಕು ಎಂದು ಹೊರಡುವಾಗಲೇ, ಶಿಬಿರದ ಆನೆ ಸುಗ್ರೀವ ಕಾವಾಡಿಗರೊಬ್ಬರ ಮೇಲೆ ದಾಳಿ ನಡೆಸಿದೆ.

ದಂತದಿಂದ ಕಾವಾಡಿಗ ರಾಜು ಎಂಬುವರಿಗೆ ತಿವಿದಿದ್ದು, ಗಂಭೀರ ಗಾಯಗೊಂಡಿರುವ ಅವರನ್ನು ಹಾಸನದ ಹಿಮ್ಸ್ ಆಸ್ಪತ್ರೆಗೆ ದಾಖಲು ಮಾಡಿ ಚಿಕಿತ್ಸೆ ನೀಡಲಾಗುತ್ತಿದೆ.

ಪುಂಡಾನೆ ಸೆರೆ ಸೆರೆ ಕಾರ್ಯಾಚರಣೆಗೆ ದುಬಾರೆ ಸಾಕಾನೆ ಶಿಬಿರದಿಂದ ಬಂದಿದ್ದ ಸುಗ್ರೀವ ಆನೆ, ಇಂದು ಬೆಳಿಗ್ಗೆ ಆಹಾರ ನೀಡುತ್ತಿದ್ದ ಕಾವಾಡಿಗನ ಮೇಲೆ ದಾಳಿ ಮಾಡಿ ದಂತದಿಂದ ತಿವಿದಿದೆ. ತಾಲ್ಲೂಕಿನ ಬಿಕ್ಕೋಡು ಗ್ರಾಮದ ತಾತ್ಕಾಲಿಕ ಸಾಕಾನೆ ಕ್ಯಾಂಪ್‌ನಲ್ಲಿ ಈ ಘಟನೆ ನಡೆದಿದೆ. ಪುಂಡಾನೆ ಸೆರೆಗೆ 6 ಸಾಕಾನೆಗಳು ಆಗಮಿಸಿ ನಿನ್ನೆ ಬೆಳಗ್ಗೆ ಯಿಂದ ಸಂಜೆವರೆಗೂ ಕಾರ್ಯಾಚರಣೆ ನಡೆಸಿದ್ದವು. ಇದರ ನೇತೃತ್ವವನ್ನು ಸುಗ್ರೀವನೇ ವಹಿಸಿದ್ದ. ಸಂಜೆಯವರೆಗೂ ಕಾರ್ಯಾಚರಣೆ ನಡೆಸಿ ನರಹಂತಕ ಒಂಟಿಕೋರೆ ಕಾಡಾನೆಯನ್ನು ಸೆರೆ ಹಿಡಿಯಲಾಗಿತ್ತು. ಆದರೆ ಕಾಡಾನೆ ತಪ್ಪಿಸಿಕೊಂಡು ಹೋಗಿದೆ. ತಪ್ಪಿಸಿಕೊಂಡು ಹೋಗಿರುವ ಅದೇ ಕಾಡಾನೆಯನ್ನು ಮತ್ತೆ ಹಿಡಿದು ಬೇರೆಡೆಗೆ ಸಾಗಿಸಲು ಬೆಳಿಗ್ಗೆ ಕಾರ್ಯಾಚರಣೆ ಆರಂಭಿಸಬೇಕು ಅನ್ನುವಷ್ಟರಲ್ಲಿ ಕ್ಯಾಪ್ಟನ್ ಸುಗ್ರೀವನ ದಾಳಿಯಿಂದ ರಾಜು ಗಾಯಗೊಂಡಿದ್ದಾರೆ.

ಹಿಮ್ಸ್‌ನ ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿರುವ ರಾಜು ಅವರನ್ನು ಡಿಸಿಎಫ್ ಸೌರಭ್‌ಕುಮಾರ್ ಭೇಟಿ ನೀಡಿ ಗಾಯಾಳು ಆರೋಗ್ಯ ವಿಚಾರಿಸಿದರು.



### ಎರಡು ಆನೆ ವಾಪಸ್

ಈ ನಡುವೆ ಕಾರ್ಯಾಚರನೆ ಗುಂಪಿನಲ್ಲಿದ್ದ ಸುಗ್ರೀವ ಹಾಗೂ ಲಕ್ಷ್ಮಣ ಆನೆಗಳಿಗೆ ಮದ ಏರಿದೆ ಎನ್ನಲಾಗಿದ್ದು, ಈ ಕಾರಣಕ್ಕೆ ಎರಡೂ ಆನೆಗಳನ್ನು ಇಲ್ಲಿಂದ ಮೂಲ ಶಿಬಿರಕ್ಕೆ ವಾಪಸ್ ಕಳಿಸಲಾಗಿದೆ. ಈ ಎರಡೂ ಆನೆಗಳ ಬದಲಿಗೆ ಭೀಮ ಹಾಗೂ ಮಹೇಂದ್ರ ಆನೆಗಳು ಶೀಘ್ರವೇ ಶಿಬಿರದ ಆನೆಗಳ ಜೊತೆ ಬಂದು ಸೇರುವ ನಿರೀಕ್ಷೆ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

### ಬುಧವಾರ ನಡೆದಿದ್ದೇನು

ಕಳೆದ ಏ.12 ರಂದು ತಾಲ್ಲೂಕಿನ ಕಣಗುಪ್ಪೆ ಗ್ರಾಮದಲ್ಲಿ ರೈತ ರಾಜಶೆಟ್ಟಿ ಎಂಬುವರು ಕಾಡಾನೆ ದಾಳಿಗೆ ಬಲಿಯಾಗಿದ್ದರು. ಇದರ ಸೆರೆಗೆ ನಿನ್ನೆ ಕಾರ್ಯಾಚರಣೆ ಆರಂಭಿಸಿ ದೈತ್ಯಾಕಾರದ ಕಾಡಾನೆಯನ್ನು ಕೆರೆಗೋಡು ಕಾಫಿ ತೋಟಮೊಂದರಲ್ಲಿ ಪಶುವೈದ್ಯರು ಅರವಳಿಕೆ ಚುಚ್ಚುಮದ್ದು ನೀಡಿ ಸೆರೆ ಹಿಡಿದಿದ್ದರು. ಸುಮಾರು ಅರ್ಧ ಗಂಟೆ ನಂತರ ಎಚ್ಚೆತ್ತ ಕಾಡಾನೆ, ಕುಮ್ಕಿ ಆನೆಗಳೊಂದಿಗೆ ಘೀಳಿಡುತ್ತಾ ಕಾದಾಟಕ್ಕಿಳಿಯಿತು.

ಬಳಿಕ ಕಾಡಾನೆಯ ಕುತ್ತಿಗೆ ಹಾಗೂ ಕಾಲಿಗೆ ಕಟ್ಟಿದ್ದ ಹಗ್ಗ ಕಸಿದುಕೊಂಡು ಕುಮ್ಕಿ ಆನೆಗಳು ಹಾಗೂ ಕಾರ್ಯಾಚರಣೆ ತಂಡಕ್ಕೆ ಚಳ್ಳೆಹಣ್ಣು ತಿನ್ನಿಸಿ ಪರಾರಿಯಾಯಿತು. ಕಾಡಾನೆ ಏಕಾಏಕಿ ನುಗ್ಗಿದರೂ ಅದೃಷ್ಟವಶಾತ್ ಯಾವುದೇ ಅಪಾಯ ಎದುರಾಗಲಿಲ್ಲ. ತಪ್ಪಿಸಿಕೊಂಡ ಆನೆ ಸಹ ಮದ ಏರಿತ್ತು ಎನ್ನಲಾಗಿದೆ.

ಒಟ್ಟಿನಲ್ಲಿ ಪುಂಡಾನೆ ಸೆರೆ ಕಾರ್ಯಾಚರಣೆಗೆ ನಾನಾ ರೀತಿಯ ವಿಘ್ನ ಎದುರಾಗುತ್ತಿದ್ದು, ಒಂದರ ಹಿಂದೆ ಒಂದರಂತೆ ಬೇಡವಾದ ಘಟನೆಗಳು ಮರುಕಳಿಸುತ್ತಿರುವುದು, ಅರಣ್ಯ ಇಲಾಖೆಗೆ ತಲೆ ನೋವಾಗಿ ಪರಿಣಮಿಸಿದೆ.

# ಗೊಂದಲ ನಡುವೆಯೂ ಬಸವಣ್ಣ ಪುತ್ಥಳಿ ನಿರ್ಮಾಣಕ್ಕೆ ಶಾಸಕ ಕೆಎಂಶಿ ಭೂಮಿಪೂಜೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ : ಜಗಜ್ಯೋತಿ ಬಸವೇಶ್ವರರ ಪ್ರತಿಮೆ ಸ್ಥಾಪನೆಗೆ ಸ್ಥಳ ನಿಗದಿ ಕುರಿತು ಪರ ವಿರೋಧ ಚರ್ಚೆ, ಅಪಸ್ವರ ನಡುವೆಯೂ ನಗರದ ಪಿಪಿ ವೃತ್ತಕ್ಕೆ ಹೊಂದಿಕೊಂಡಂತೆ ಶ್ರೀ ಜಗಜ್ಯೋತಿ ಬಸವೇಶ್ವರ ಪುತ್ಥಳಿ ನಿರ್ಮಾಣ ಸಮಿತಿ ಗುರುವಾರ ಭೂಮಿ ಪೂಜೆ ನೆರವೇರಿಸುವ ಮೂಲಕ ಅಂತಿಮ ಸ್ಥಳ ಇದೇ ಎಂಬ ಸಂದೇಶ ರವಾನೆ ಮಾಡಿದೆ.

ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಕರ್ನಾಟಕ ಗೃಹ ಮಂಡಳಿ ಅಧ್ಯಕ್ಷರೂ ಆದ ಶಾಸಕ ಕೆ.ಎಂ ಶಿವಲಿಂಗೇಗೌಡ ಮಾತನಾಡಿ, ಸಮಾನತೆಯ ಪ್ರತಿಪಾದಕ ಜಗಜ್ಯೋತಿ ಬಸವೇಶ್ವರರ ಪ್ರತಿಮೆ ಸ್ಥಾಪನೆ ಕುರಿತು ಇಲ್ಲ ಸಲ್ಲದ ಹೇಳಿಕೆಗಳನ್ನು ನೀಡುವುದು ತರವಲ್ಲ ಎಂದು ವಿರೋಧಿಗಳಿಗೆ ತಿವಿದರು.

ಜಾತಿ ಮತ ಪಕ್ಷಬೇಧ ಮರೆತು ಎಲ್ಲರೂ ಸೇರಿ ಶ್ರದ್ಧೆ ಮತ್ತು ಭಕ್ತಿಯಿಂದ ಬಸವಣ್ಣ ಅವರ ಪ್ರತಿಮೆಯನ್ನು ಸ್ಥಾಪಿಸುವ ಮೂಲಕ ನಾವೆಲ್ಲರೂ ಗೌರವ ಸಮರ್ಪಿಸೋಣ ಎಂದು ಕರೆ ನೀಡಿದರು.



ಆಕರ್ಷಕ ರೂಪದಲ್ಲಿ ಬಸವಣ್ಣ ಅವರ ಪುತ್ಥಳಿ ನಿರ್ಮಾಣ ವಾಗುತ್ತಿದ್ದು ನಗರದ ಹೃದಯ ಭಾಗವಾಗಿರುವ ಈ ಪ್ರದೇಶದಲ್ಲಿ ಬಸವಣ್ಣ ಪ್ರತಿಮೆ ಸ್ಥಾಪಿಸುವುದರಿಂದ ಬಸವಣ್ಣ ಅವರ ಅನುಯಾಯಿಗಳ ಸಂತಸಕ್ಕೆ ಕಾರಣವಾಗಿದೆ ಎಂದರು.

ಸಮಿತಿಯ ಜಿ.ವಿ ಶಶಿಧರ್ ಮಾತನಾಡಿ, ನಗರ ಸೇರಿದಂತೆ ತಾಲೂಕಿನಲ್ಲಿ ಬಸವ ಅನುಯಾಯಿಗಳು ಹೆಚ್ಚಿನ ಸಂಖ್ಯೆಯಲ್ಲಿದ್ದು, ಇವರೆಲ್ಲರ ದಶಕಗಳ ಕನಸು ಇನ್ನು ಕೆಲವೇ ದಿನಗಳಲ್ಲಿ ಜಗಜ್ಯೋತಿ ಬಸವೇಶ್ವರರ ಪುತ್ಥಳಿ ಲೋಕಾರ್ಪಣೆ ಯೊಂದಿಗೆ ನನಸಾಗಲಿದೆ ಎಂದು ಸಂತಸ ಹಂಚಿಕೊಂಡರು.

ಸಮಿತಿ ಅಧ್ಯಕ್ಷ ಅಡವಿಸ್ವಾಮಿ ಮಾತನಾಡಿ, ತಾಲೂಕಿನ ಜನತೆಯ ಕನಸು, ನಗರದ ಹೃದಯ ಭಾಗದಲ್ಲಿ ಬಸವಣ್ಣ ಅವರ ಪ್ರತಿಮೆ ಸ್ಥಾಪಿಸಬೇಕೆಂಬುದಾಗಿತ್ತು. ಆ ಕಾಲ ಈಗ ಕೂಡಿಬಂದಿದೆ. ಪ್ರತಿಮೆ ಸ್ಥಾಪನೆಗೆ ಸಹಕಾರ ನೀಡುತ್ತಿರುವ ಎಲ್ಲರಿಗೂ ಜಗಜ್ಯೋತಿ ಬಸವೇಶ್ವರರ ಅನುಗ್ರಹ ಪ್ರಾಪ್ತಿಯಾಗಲಿ ಎಂದು ಆಶಿಸಿದರು.

ಶ್ರೀ ಜಗಜ್ಯೋತಿ ಬಸವೇಶ್ವರ ಪುತ್ಥಳಿ ನಿರ್ಮಾಣ ಸಮಿತಿಯ ಕಾರ್ಯಾಧ್ಯಕ್ಷ ಗಂಜಿಗೆರೆ ಚಂದ್ರಶೇಖರ್, ಉಪಾಧ್ಯಕ್ಷ ಜಿ.ವಿ ಬಸವರಾಜ್, ಕಾರ್ಯದರ್ಶಿ ಜ್ಞಾನೇಶ್, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಧರ್ಮಶೇಖರ್,

ಸಮಿತಿಯ ಜಯಣ್ಣ, ಉಮೇಶ್, ಬಂಕ್ ಮಂಜಣ್ಣ ಮತ್ತು ಇತರರು ಉಪಸ್ಥಿತರಿದ್ದರು.

# ವಿವಿಧ ಬೇಡಿಕೆ: ನಿವೃತ್ತ ನೌಕರರ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಡಿಎ ಪಾವತಿ ಸೇರಿದಂತೆ ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಬಿ.ಎಸ್.ಎನ್.ಎಲ್ ನಿವೃತ್ತ ನೌಕರರ ಎಲ್ಲಾ ಸಂಘಟನೆಗಳ ವತಿಯಿಂದ ರಾಷ್ಟ್ರವ್ಯಾಪಿ ಪ್ರತಿಭಟನೆ ಭಾಗವಾಗಿ ನಗರದಲ್ಲಿ ಭಾರೀ ಪ್ರತಿಭಟನೆ ನಡೆಯಿತು.

ನಗರದ ಬಿ.ಎಂ. ರಸ್ತೆ ಬಳಿ ಇರುವ ಬಿ.ಎಸ್.ಎನ್.ಎಲ್ ಕಚೇರಿ ಆವರಣದಲ್ಲಿ ನಡೆದ ಪ್ರತಿಭಟನೆಯಲ್ಲಿ ನೂರಕ್ಕೂ ಅಧಿಕ ನಿವೃತ್ತ ನೌಕರರು ಭಾಗವಹಿಸಿ ಕೇಂದ್ರ ಸರ್ಕಾರದ ವಿರುದ್ಧ

ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನಾಕಾರರು ತಮ್ಮ ಬೇಡಿಕೆಗಳನ್ನೊಳಗೊಂಡ ಫಲಕಗಳನ್ನು ಹಿಡಿದು ಘೋಷಣೆ ಕೂಗಿ ಸರ್ಕಾರದ ವಿರುದ್ಧ ತೀವ್ರ ಅಸಮಾಧಾನ ಹೊರಹಾಕಿದರು. ಡಿಎ

ಪಾವತಿ ತಡೆಹಿಡಿದಿರುವುದು ನಿವೃತ್ತ ನೌಕರರ ಜೀವನವನ್ನು ಸಂಕಷ್ಟಕ್ಕೆ ತಳ್ಳಿದೆಯೆಂದು ಆರೋಪಿಸಿದರು. ಕೇಂದ್ರ ಸರ್ಕಾರದ ನಿರ್ಲಕ್ಷ್ಯ ಧೋರಣೆಯಿಂದ ಪಿಂಚಣಿದಾರರು




ಆರ್ಥಿಕವಾಗಿ ತೀವ್ರ

ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಪ್ರತಿಭಟನಾಕಾರರು ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ನಿವೃತ್ತ ನೌಕರ ಎಸ್. ನಾಗರಾಜು, ಕೇಂದ್ರ ಸರ್ಕಾರ ಬಜೆಟ್‌ನಲ್ಲಿ ಹೊಸ ನಿಎಯಮಗಳನ್ನು ಸೇರಿಸುವ ಮೂಲಕ ಪೆನ್ಷನ್ ರಿವಿಷನ್ ಹಾಗೂ ಟಿಎ

ನೀಡುವ ಪ್ರಕ್ರಿಯೆಗೆ ಅಡ್ಡಿ ಉಂಟುಮಾಡಿದೆ ಎಂದು ಟೀಕಿಸಿದರು. ಇತ್ತೀಚಿನ ನೀತಿಗಳ ಪ್ರಕಾರ ಭವಿಷ್ಯದಲ್ಲಿ ಯಾವುದೇ ಪೇ ಕಮಿಷನ್ ಅಥವಾ ರಿವಿಷನ್ ನಡೆದರೂ ಅದರ ಅನುಸಾರ ಪಿಂಚಣಿ ಪರಿಷ್ಕರಣೆ ಮಾಡುವುದಿಲ್ಲ ಹಾಗೂ ಟಿಎ ನೀಡುವುದಿಲ್ಲ ಎಂಬ ರೀತಿಯ ಅಸ್ಪಷ್ಟತೆ ಉಂಟಾಗಿದೆ ಎಂದು ಹೇಳಿದರು.

ಅದರ ಜೊತೆಗೆ, ಜನವರಿ 2026 ರಿಂದ ನೀಡಬೇಕಾಗಿದ್ದ ಡಿಎ ಪಾವತಿಯನ್ನು ಸರ್ಕಾರ ತಡೆಹಿಡಿದಿರುವುದು ಅತ್ಯಂತ ಖಂಡನೀಯ. ಸರ್ಕಾರ ಕೆಲ ಷರತ್ತು ವಿಧಿಸುವ ಮೂಲಕ ಸರ್ಕಾರ ಹೊಣೆಗಾರಿಕೆಯಿಂದ ತಪ್ಪಿಸಿಕೊಳ್ಳಲು ಯತ್ನಿಸುತ್ತಿದೆ. ಇದು ನಿವೃತ್ತ ನೌಕರರ ಮೇಲಿನ ಅನ್ಯಾಯವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಇಂದಿನ ಪರಿಸ್ಥಿತಿಯಲ್ಲಿ ದಿನದಿಂದ ದಿನಕ್ಕೆ ಬೆಲೆ ಏರಿಕೆ ಹೆಚ್ಚಾಗುತ್ತಿದ್ದು, ಸಾಮಾನ್ಯ ಜೀವನ ನಡೆಸುವುದೇ ಕಷ್ಟಕರವಾಗಿದೆ.

ಇಂತಹ ಸಂದರ್ಭದಲ್ಲಿ ಡಿಎ ತಡೆಹಿಡಿದಿರುವುದು ಪಿಂಚಣಿದಾರರ ಬದುಕಿಗೆ ಮತ್ತಷ್ಟು ಹೊರೆ ತಂದಿದೆ. ಆದ್ದರಿಂದ ಸರ್ಕಾರ ತಕ್ಷಣ ಕ್ರಮ ಕೈಗೊಂಡು ಬಾಕಿ ಇರುವ ಡಿಎ ಬಿಡುಗಡೆ ಮಾಡಬೇಕು ಹಾಗೂ ಪೆನ್ಷನ್ ಸಂಬಂಧಿತ ಎಲ್ಲಾ ಸಮಸ್ಯೆಗಳನ್ನು ಶೀಘ್ರ ಪರಿಹರಿಸಬೇಕು ಎಂದು ಒತ್ತಾಯಿಸಿದರು.

ಎಲ್ಲಾ ಸಂಘಟನೆಗಳು ಒಗ್ಗಟ್ಟಿನಿಂದ ಈ ಹೋರಾಟ ನಡೆಸುತ್ತಿದ್ದು, ಸರ್ಕಾರ ಸ್ಪಂದಿಸದಿದ್ದಲ್ಲಿ ಮುಂದಿನ ದಿನಗಳಲ್ಲಿ ಇನ್ನಷ್ಟು ತೀವ್ರ ಹೋರಾಟ ಕೈಗೊಳ್ಳಲಾಗುವುದು ಎಂದು

ಪ್ರತಿಭಟನಾಕಾರರು ತಿಳಿಸಿದರು. ಏಪ್ರಿಲ್ 30 ಮತ್ತು ಮೇ 1ನೇ ದಿನಾಂಕದಂದು ಬೃಹತ್ ಹೋರಾಟ ನಡೆಸುವುದಾಗಿ ಎಚ್ಚರಿಸಿದರು. ಪ್ರತಿಭಟನೆಯಲ್ಲಿ ನಿವೃತ್ತ ನೌಕರರಾದ ರಾಜು, ಶಿವಣ್ಣ, ಸಂಪತ್ ಕುಮಾರ್, ಕಾಂತರಾಜು, ಐಯ್ಯಂಗಾರ್, ದೇವರಾಜು, ನಾಗರಾಜ್, ರಾಮಚಂದ್ರ, ನಿರ್ವಹಣೆಗೌಡ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಒಂದೇ ಕುಟುಂಬದ ಆರು ಮಂದಿ ಬಲಿ

## ಮಂತ್ರಾಲಯಕ್ಕೆ ತೆರಳುತ್ತಿದ್ದವರು ಮಸಣಕ್ಕೆ: ಗ್ರಾಮದಲ್ಲಿ ನೀರವ ಮೌನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಮಂತ್ರಾಲಯದ ಶ್ರೀ ಗುರು ರಾಘವೇಂದ್ರರ ದರ್ಶನಕ್ಕೆ ತೆರಳುತ್ತಿದ್ದ ಮಾರ್ಗ ಮಧ್ಯೆ ಭೀಕರ ರಸ್ತೆ ಅಪಘಾತ ಸಂಭವಿಸಿ, ತಾಲ್ಲೂಕಿನ ಶೆಟ್ಟಿಗೆರೆ ಗ್ರಾಮದ ಒಂದೇ ಕುಟುಂಬ ಆರು ಮಂದಿ ದಾರುಣವಾಗಿ ಸಾವನ್ನಪ್ಪಿದ್ದಾರೆ.

ಗ್ರಾಮದ ಲೋಲಾಕ್ಷಿ, ಯಶೋದ, (60), ಕುಮಾರ್(50), ದೀಪಿಕಾ ವೀಣಾ(42), ಪುಟ್ಟಮ್ಮ(55), ಸುನೀಲ್(40), ಬಾಲಕಿ ಬೆಳ್ಳಿ(3) ಸಾವನ್ನಪ್ಪಿದ ದುರ್ದೈವಿಗಳು.

ಇವರಲ್ಲದೆ ಇನ್ನೂ ಇಬ್ಬರು ಮೃತಪಟ್ಟಿದ್ದು, ಮೃತರ ಸಂಖ್ಯೆಗೆ 8ಕ್ಕೆ ಏರಿದೆ. ದುರಂತರದಲ್ಲಿ 10ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ.

ಬುಧವಾರ ಮಧ್ಯಾಹ್ನ ಮನೆ ಬಾಗಿಲಿಗೆ ಬೀಗ ಹಾಕಿಕೊಂಡು ಮೂರು ಕುಟುಂಬಗಳ ಸದಸ್ಯರು ಅಶೋಕ್ ಲೇಲ್ಯಾಂಡ್ ಗೂಡ್ಸ್ ವಾಹನದಲ್ಲಿ ಮಂತ್ರಾಲಯಕ್ಕೆ ಪ್ರಯಾಣ ಬೆಳೆಸಿದ್ದರು.

ಆದರೆ ದೇವರ ದರ್ಶನಕ್ಕೂ ಮುನ್ನವೇ ಸಂಭವಿಸಿದ ಭೀಕರ ಅಪಘಾತದಲ್ಲಿ ಅಷ್ಟೂ ಮಂದಿ ಜೀವ ಕಳೆದು ಕೊಂಡಿರುವುದರಿಂದ ಗ್ರಾಮದಲ್ಲಿ ನೀರವ ಮೌನ ಮನೆ ಮಾಡಿದೆ.



> ಎಂಟು ಭಕ್ತರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಇತರೆ ಹಲವರು ಗಾಯಗೊಂಡರು ಮತ್ತು ಚಿಕಿತ್ಸೆಗಾಗಿ ಹತ್ತಿರದ ಆಸ್ಪತ್ರೆಗಳಿಗೆ ಸ್ಥಳಾಂತರಿಸಲಾಯಿತು ಎಂದು ಯಮ್ಮಿಗನೂರು ಉಪ ಪೊಲೀಸ್ ವರಿಷ್ಠಾಧಿಕಾರಿ (ಡಿಎಸ್‌ಪಿ) ಎನ್. ಭಾರ್ಗವಿಗೆ ತಿಳಿಸಿದರು. ಎನ್‌ಎಚ್ 167ರಲ್ಲಿ ಬೆಳಗಿನ ಜಾವ 3-4 ಗಂಟೆ ಸುಮಾರಿಗೆ ಅಪಘಾತ ಸಂಭವಿಸಿದ್ದು, ಚಾಲಕ ನಿದ್ರೆಯಲ್ಲಿದ್ದಾಗ ತಪ್ಪು ದಿಕ್ಕಿನಲ್ಲಿ ಚಾಲನೆ ಮಾಡಿದ್ದರಿಂದ ಅಪಘಾತ ಸಂಭವಿಸಿದೆ ಎಂದು ಅವರು ಹೇಳಿದರು.

ಮಂತ್ರಾಲಯಕ್ಕೆ ಹೋಗುತ್ತಿದ್ದ ಲೈಲ್ಯಾಂಡ್ ವಾಹನಕ್ಕೆ ಬೀದರ್‌ನಿಂದ ತುಮಕೂರಿಗೆ ಹೋಗುತ್ತಿದ್ದ ಟ್ಯಾಂಕರ್ ಡಿಕ್ಕಿ ಹೊಡೆದಿದೆ. ಪರಿಣಾಮ ಸ್ಥಳದಲ್ಲೇ 8 ಜನ ಸಾವನ್ನಪ್ಪಿದ್ದಾರೆ.

ಕಲ್ಲುದೇವಕುಂಟ ಗ್ರಾಮದ ಬಳಿ ಇಂದು ಬೆಳಗ್ಗೆ ಲೈಲ್ಯಾಂಡ್ ವಾಹನಕ್ಕೆ ಟ್ಯಾಂಕರ್ ಡಿಕ್ಕಿಯಾದ ಪರಿಣಾಮ ಈ ದುರಂತ ಘಟಿಸಿದೆ.

ಈ ಸಂಬಂಧ ಟ್ಯಾಂಕರ್ ಚಾಲಕನನ್ನು ಅಲ್ಲಿನ ಪೊಲೀಸರು ವಶಕ್ಕೆ ಪಡೆದು ತೀವ್ರ ವಿಚಾರಣೆಗೆ ಒಳಪಡಿಸಿದ್ದಾರೆ.

ಶ್ರೀ ರಾಘವೇಂದ್ರ ಸ್ವಾಮಿ ದರ್ಶನಕ್ಕಾಗಿ ಮಂತ್ರಾಲಯಕ್ಕೆ ಪ್ರಯಾಣಿಸುತ್ತಿದ್ದ ವಾಹನದಲ್ಲಿ ಸುಮಾರು 20 ಮಂದಿ ಪ್ರಯಾಣಿಸುತ್ತಿದ್ದರು ಎನ್ನಲಾಗಿದೆ.

ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಘಟನೆಯ ಬಗ್ಗೆ ಆಘಾತ ವ್ಯಕ್ತಪಡಿಸಿ ಗಾಯಾಳುಗಳ ಸ್ಥಿತಿಯ ಬಗ್ಗೆ ವಿಚಾರಿಸಿದರು.

# ಅದ್ಭುತ ಯಶಸ್ಸು ಕಂಡ ಕಾಲೇಜುರಂಗ

ಹಾಸನ: ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ 3 ದಿನಗಳ ಕಾಲ ನಡೆದ ಕಾಲೇಜು ರಂಗ ನಾಟಕ ಪ್ರದರ್ಶನ ಯಶಸ್ವಿಯಾಗಿ ಸಂಪನ್ನಗೊಂಡಿತು. ನಾಟ್ಯ ವೈಭವ, ರಂಗಸಿರಿ, ಹಾಸನ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾದ ನಾಟ್ಯ ವೈಭವ- ಕಾಲೇಜು ರಂಗ ಕಲಾಭಿಮಾನಿಗಳ ಅಪಾರ ಮೆಚ್ಚುಗೆಗೆ ಪಾತ್ರವಾಯಿತು.

ನಾಟಕೋತ್ಸವದಲ್ಲಿ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ತಮ್ಮ ಕಲಾತ್ಮಕ ಪ್ರತಿಭೆ ಅನಾವರಣಗೊಳಿಸಿದರು. ಪ್ರತಿದಿನವೂ ವಿಭಿನ್ನ ಕಥಾ ಹಂದರಗಳೊಂದಿಗೆ ಪ್ರೇಕ್ಷಕರ ಮನಗೆಲ್ಲುವ ನಾಟಕ ಪ್ರದರ್ಶನಗೊಂಡವು.

ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಕೆಯೂಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಜಿಲ್ಲೆಯ ಯುವ ಪ್ರತಿಭೆಗಳು ರಂಗಭೂಮಿಯಲ್ಲಿ ತೋರಿದ ಶ್ರಮ ಮತ್ತು ಸಮರ್ಪಣೆ ಶ್ಲಾಘನೀಯ ಎಂದರು.

3 ದಿನಗಳಿಂದ ಪ್ರದರ್ಶನಗೊಂಡ ನಾಟಕಗಳು ರಂಗಭೂಮಿಯ ವೈಭವವನ್ನು ಮತ್ತೆ ನೆನಪಿಸಿವೆ. ರಾಜಕೀಯದಾಚೆಗೆ ಜಿಲ್ಲೆ ಕಲೆ, ಸಾಹಿತ್ಯ

ಮತ್ತು ಸಂಸ್ಕೃತಿಯಲ್ಲಿ ತನ್ನದೇ ಗುರುತು ಹೊಂದಿದೆ ಎಂಬುದನ್ನು ನಾಟಕೋತ್ಸವ ಮತ್ತೊಮ್ಮೆ ಸಾಬೀತುಪಡಿಸಿದೆ ಎಂದು ಹೇಳಿದರು.



ನನ್ನ ಅಂಬೇಡ್ಕರ್ ನಾಟಕಕ್ಕೆ ಪ್ರೇಕ್ಷಕರಿಂದ ಭರ್ಜರಿ ಪ್ರತಿಕ್ರಿಯೆ ಸಿಕ್ಕಿತು. ಕೋಟಿಗಾನಹಳ್ಳಿ ರಾಮಯ್ಯ ಅವರ ಸಾಹಿತ್ಯ ಮತ್ತು ಬಾಬಾ ಸಾಹೇಬ್ ಕಾಂಬಳೆ ಅವರ ಸಂಗೀತ ನಿರ್ದೇಶನ ನಾಟಕಕ್ಕೆ ವಿಶೇಷ ಮೆರಗು ನೀಡಿತು.

ಅಂಬೇಡ್ಕರ್ ಅವರ ಚಿಂತನೆಗಳು ಮತ್ತು ಸಮಾಜ ಪರಿವರ್ತನೆಗೆ ಅವರ ಕೊಡುಗೆಗಳನ್ನು ಪರಿಣಾಮಕಾರಿಯಾಗಿ ಚಿತ್ರಿಸಿದ ಈ ನಾಟಕ ಪ್ರೇಕ್ಷಕರ ಮನದಲ್ಲಿ ಆಳವಾದ ಪ್ರಭಾವ ಬೀರಿತು.

ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿನಿಯರು ಲೋಕಾಯುಕ್ತರು ಬರುತ್ತಾರೆ ಎಂಬ ನಾಟಕವನ್ನು ಯಶಸ್ವಿಯಾಗಿ ಪ್ರದರ್ಶಿಸಿದರು. ವಿದೇಶಿ ಕೃತಿ ಆಧಾರಿತ ಈ ನಾಟಕ, ಭ್ರಷ್ಟಾಚಾರದ ವಿರುದ್ಧದ ಹೋರಾಟವನ್ನು ಹಾಸ್ಯಮಯವಾಗಿ ಮತ್ತು ಚಿಂತನೆಗೆ ಪ್ರೇರೇಪಿಸುವ ರೀತಿಯಲ್ಲಿ ನಿರೂಪಿಸಿತು. ಇದೇ ರೀತಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳು ಅಭಿನಯಿಸಿದ ಸರಸತಿಯಾಗಲೊಲ್ಲೆ ನಾಟಕ, ಕೊನೆಯ ದಿನ ಸೆಂಟ್ರಲ್ ಕಾಮರ್ಸ್ ಕಾಲೇಜಿನ ವಿದ್ಯಾರ್ಥಿಗಳು ಪತ್ರಕರ್ತ ಜಿ.ಪ್ರಕಾಶ್ ಅವರ ಕಾದಂಬರಿ ಆಧರಿಸಿದ ನನ್ಸಿರಿ ನಾಟಕವನ್ನು ವೇದಿಕೆಗೆ ತಂದರು.

ಕೆಯೂಡಬ್ಲ್ಯೂಜೆ ಉಪಾಧ್ಯಕ್ಷ ಹೆಚ್.ಬಿ. ಮದನ್‌ಗೌಡ ಮಾತನಾಡಿ, ಇಂತಹ ನಾಟಕೋತ್ಸವ ಯುವಕರಲ್ಲಿ ಸಾಂಸ್ಕೃತಿಕ ಚಟುವಟಿಕೆ

ಬಗ್ಗೆ ಆಸಕ್ತಿ ಹೆಚ್ಚಿಸುವುದರ ಜೊತೆಗೆ ರಂಗಭೂಮಿ ಪುನರುಜ್ಜೀವನಕ್ಕೆ ಕಾರಣವಾಗುತ್ತವೆ ಎಂದರು.

ಇದೇ ವೇಳೆ ತಾವು ಹಿಂದೆ ಅನೇಕ ಸಲ ಇದೇ ಕಲಾಭವನದಲ್ಲಿ ನಾಟಕ ಪ್ರದರ್ಶನ ಆಯೋಜನೆ ಮಾಡಿದ್ದನ್ನು ಮೆಲುಕು ಹಾಕಿದರು. ಸಂಗ್ಯಾ ಬಾಳ್ಯ ಎನ್ನುವ ನಾಟಕ ಇಂದಿಗೂ ಕೂಡ ಈ ವೇದಿಕೆ ಮೇಲೆ ನೆನಪಾಗುತ್ತದೆ. ಆ ನಾಟಕದಲ್ಲಿ ಅಭಿನಯ ಮಾಡಿದ ಅನೇಕ ಪಾತ್ರಧಾರಿಗಳು ಇಲ್ಲಿದ್ದಾರೆ ಎಂದರು. ಕಲಾಭವನ ವೇದಿಕೆ ಅನೇಕ ಪ್ರತಿಭೆಗಳನ್ನು ಹೊರತಂದಿದೆ ಎಂದು ಹೇಳಿದರು.

ಹಿರಿಯ ಕಲಾವಿದ ಗುಂಡಣ್ಣ ತಮ್ಮ ಭಾಷಣದಲ್ಲಿ, ಜಿಲ್ಲೆಯಲ್ಲಿ ರಂಗಭೂಮಿಗೆ ಬೇಕಾದಷ್ಟು ಪ್ರೋತ್ಸಾಹ ಸಿಗುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಯುವಕರು ರಂಗಭೂಮಿಯತ್ತ ಹೆಚ್ಚು ಗಮನ ಹರಿಸಿ, ಅದನ್ನು ಇನ್ನಷ್ಟು ಬಲಪಡಿಸಬೇಕು ಎಂದು ಕರೆ ನೀಡಿದರು. ಶಿಕ್ಷಣದ ಜೊತೆಗೆ ಕಲೆ ಮತ್ತು ಸಂಸ್ಕೃತಿ ಕೂಡ ವ್ಯಕ್ತಿತ್ವ ವಿಕಾಸಕ್ಕೆ ಅತೀ ಮುಖ್ಯವೆಂದು ಅವರು ಹೇಳಿದರು.

ಒಟ್ಟಿನಲ್ಲಿ ನಾಟಕೋತ್ಸವ ಕಲಾಭಿಮಾನಿಗಳನ್ನು ಸೆಳೆಯುವಲ್ಲಿ ಯಶಸ್ವಿಯಾಯಿತು. ಪ್ರತಿದಿನ ಕಲಾಕ್ಷೇತ್ರ ತುಂಬಿ ತುಳುಕುತ್ತಿತ್ತು. ವಿದ್ಯಾರ್ಥಿಗಳ ಅಭಿನಯ, ನಿರ್ದೇಶನ ಹಾಗೂ ತಾಂತ್ರಿಕ ನಿರ್ವಹಣೆ ಎಲ್ಲವೂ ಪ್ರಶಂಸೆಗೆ ಪಾತ್ರವಾಯಿತು.

# ಮೂರು ಮಹತ್ವದ ಮಸೂದೆ ಮಂಡನೆ

ನವದೆಹಲಿ: ಲೋಕಸಭೆಯಲ್ಲಿ ಗದ್ದಲದ ನಡುವೆಯೇ ಮಹಿಳಾ ಮೀಸಲಾತಿ ಹಾಗೂ ಗಡಿ ನಿರ್ಣಯ ಹಾಗೂ ಕೇಂದ್ರಾಡಳಿತ ಪ್ರದೇಶಗಳ ಕಾನೂನುಗಳು (ತಿದ್ದುಪಡಿ) ಮಸೂದೆ, 2026 ಮಂಡನೆಯಾಗಿದೆ.

ದೇಶದ ಜನಸಂಖ್ಯೆಗೆ ಅನುಗುಣವಾಗಿ ಲೋಕಸಭೆಯ ಬಲವನ್ನು ಪ್ರಸ್ತುತ ಇರುವ 543 ರಿಂದ 850 ಸ್ಥಾನಗಳಿಗೆ ಹೆಚ್ಚಿಸುವ ಪ್ರಸ್ತಾವನೆ ಇದೆ. ಇದೇ ರೀತಿ ರಾಜ್ಯ ವಿಧಾನಸಭೆಗಳ ಸ್ಥಾನಗಳನ್ನೂ ವಿಸ್ತರಿಸುವ ಉದ್ದೇಶವನ್ನು ಸರ್ಕಾರ ಹೊಂದಿದೆ. ಕ್ಷೇತ್ರ ಪುನರ್ವಿಂಗಡಣೆಯ ನಂತರವಷ್ಟೇ ಇದು ಸಾಧ್ಯವಾಗಲಿದೆ.

ಕೇಂದ್ರ ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್ ಅವರು ಲೋಕಸಭೆಯಲ್ಲಿ ಮಸೂದೆಯನ್ನು ಮಂಡಿಸಿದರು. ಕಾಂಗ್ರೆಸ್ ನಾಯಕ ಕೆ.ಸಿ.ವೇಣುಗೋಪಾಲ್ ಮಸೂದೆಯನ್ನು ವಿರೋಧಿಸಿದ್ದು, ಸದನದಲ್ಲಿ ಕೋಲಾಹಲಕ್ಕೆ ಕಾರಣವಾಯಿತು

ಈ ನಡುವೆ ಮಹಿಳಾ ಮೀಸಲಾತಿ ಮಸೂದೆಯ ಬಗ್ಗೆ ಇಂದಿನ ವಿಶೇಷ ಅಧಿವೇಶನದಲ್ಲಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಈ ಮಸೂದೆಯನ್ನು ಮಹಿಳಾ ಸಬಲೀಕರಣದ ಐತಿಹಾಸಿಕ ಹೆಜ್ಜೆ ಎಂದು ಬಣ್ಣಿಸಿದರು. ಮಹಿಳಾ ಮೀಸಲಾತಿಗೆ ರಾಜಕೀಯದ ಬಣ್ಣ ಬಳಿಯುವ ಅಗತ್ಯವಿಲ್ಲ ಎಂದು ಹೇಳಿದ ಮೋದಿ, ಈ ಕಾಯ್ದೆಯನ್ನು 25-30 ವರ್ಷಗಳ ಹಿಂದೆಯೇ ಜಾರಿಗೊಳಿಸಬೇಕಿತ್ತು ಎಂದರು.

ನಾನು ಒಂದು ಪಕ್ಷ ಹೊರತುಪಡಿಸಿ ಎಲ್ಲಾ ಪಕ್ಷಗಳನ್ನು ಭೇಟಿಯಾದೆ. ಯಾರೂ ಮಹಿಳಾ ಮೀಸಲಾತಿ ಮಸೂದೆ ತಾತ್ವಿಕವಾಗಿ ವಿರೋಧಿಸಲಿಲ್ಲ. ಆದರೆ ಅದಾದ ನಂತರ




ಒಂದು ರಾಜಕೀಯ ದೃಷ್ಟಿಕೋನ ಇಟ್ಟುಕೊಂಡು ಇದಕ್ಕೆ ವಿರೋಧ ವ್ಯಕ್ತವಾಗುತ್ತಿದೆ. ಆದರೆ ನಾನು ಅಂತಹ ಜನರಿಗೆ ಸ್ನೇಹಿತನಂತೆ ಒಂದು ಸಲಹೆ ನೀಡಲು ಬಯಸುತ್ತೇನೆ. ನಾವೆಲ್ಲರೂ ಒಟ್ಟಿಗೆ ಇದನ್ನು ಜಾರಿಗೊಳಿಸಿದರೆ ದೇಶಕ್ಕೆ ಮಾಡಿದ ಸೇವೆಗಾಗಿ ಇತಿಹಾಸವು ನಮ್ಮನ್ನು ನೆನಪಿಸಿಕೊಳ್ಳುತ್ತದೆ ಎಂದು ಪ್ರಧಾನಿ ಮೋದಿ ಹೇಳಿದರು.

ನಾವು ಭಾರತೀಯರು ರಾಷ್ಟ್ರಕ್ಕೆ ಹೊಸ ದಿಕ್ಕು ನೀಡಲು ಒಗ್ಗೂಡುತ್ತಿದ್ದೇವೆ. ನಮ್ಮ ಆಡಳಿತ ವ್ಯವಸ್ಥೆಯನ್ನು ಬಲಪಡಿಸಲು ನಾವು ಅರ್ಥಪೂರ್ಣ ಪ್ರಯತ್ನ ಮಾಡುತ್ತಿದ್ದೇವೆ.

ನಮ್ಮ ಆಡಳಿತ ವ್ಯವಸ್ಥೆಯನ್ನು ಬಲಪಡಿಸಲು ನಾವು ಅರ್ಥಪೂರ್ಣ ಪ್ರಯತ್ನ ಮಾಡುತ್ತಿದ್ದೇವೆ. ಭಾರತ ಪ್ರಜಾಪ್ರಭುತ್ವದ ತಾಯಿ. ಈ ಅಭಿವೃದ್ಧಿಯ ಪ್ರಯಾಣದಲ್ಲಿ ಹೊಸ ಆಯಾಮವನ್ನು ಸೇರಿಸಲು ನಮಗೆ ಪವಿತ್ರವಾದ ಅವಕಾಶ ನೀಡಲಾಗಿದೆ. ರಾಷ್ಟ್ರ ನಿರ್ಮಾಣದ ನಿರ್ಧಾರ ತೆಗೆದುಕೊಳ್ಳುವ ಪ್ರಕ್ರಿಯೆಯಲ್ಲಿ ದೇಶದ ಅರ್ಧದಷ್ಟು ಜನಸಂಖ್ಯೆಯಾದ ಮಹಿಳೆಯರನ್ನು ಸೇರಿಸಿಕೊಳ್ಳುವ ಅವಕಾಶ ನಮಗೆ ಸಿಕ್ಕಿರುವುದು ನಮ್ಮ ಅದೃಷ್ಟ ಎಂದು ಮೋದಿ ಹೇಳಿದರು.

# ಸಾಹಿತ್ಯ ವೇದಿಕೆ ಸದಾ ಹೊಸ ಪ್ರತಿಭೆಗಳ ಹುಡುಕಾಟ ಮಾಡುತ್ತದೆ : ತಾಲ್ಲೂಕು ಅಧ್ಯಕ್ಷೆ ಕೆ.ಸಿ.ಗೀತಾ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ : ಕ್ರಾಫ್ಟ್ ಮಕ್ಕಳಲ್ಲಿ ಚಿಂತನಾ ಹಾಗೂ ಸೃಜನಾತ್ಮಕತೆಯನ್ನು ವೃದ್ಧಿಸುತ್ತದೆ. ಮಿತವ್ಯಯ ಸಾಮಾಗ್ರಿಗಳನ್ನು ಬಳಸಿಕೊಂಡು ಗುಣಮಟ್ಟದ ಆಕರ್ಷಕ, ಮನಮೋಹಕ ಕುಶಲತೆಯ ಪರಿಕರಗಳನ್ನು ಸೃಜಿಸುವುದು ಕ್ರಾಫ್ಟಿನ ಪ್ರಮುಖ ಧ್ಯೇಯವಾಗಿದೆ ಎಂದು ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ತಾಲ್ಲೂಕು ಅಧ್ಯಕ್ಷೆ ಕೆ.ಸಿ. ಗೀತಾ ಅಭಿಪ್ರಾಯಪಟ್ಟರು.

ಅವರು ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ (ರಿ.), ಬೆಂಗಳೂರು, ತಾಲ್ಲೂಕು ಘಟಕ ಹಾಸನ ಹಾಗೂ ಭಾರತ್ ಸ್ಕೌಟ್ಸ್ ಗೈಡ್ಸ್ ಜಿಲ್ಲಾ ಸಂಸ್ಥೆ ಹಾಸನ ವತಿಯಿಂದ ಜಿಲ್ಲಾ ಸ್ಕೌಟ್ಸ್ ಗೈಡ್ಸ್ ಸಮುದಾಯ ಭವನದಲ್ಲಿ ಹಮ್ಮಿಕೊಂಡಿದ್ದ ಬೇಸಿಗೆ ಶಿಬಿರದಲ್ಲಿ ಮಕ್ಕಳಿಗೆ ಕ್ರಾಫ್ಟ್ ತರಗತಿ ನೀಡಿ ಮಾತನಾಡಿ ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ಪ್ರತಿವರ್ಷ ಹೊಸ ಪ್ರತಿಭೆಗಳ ಹುಡಕಾಟದಲ್ಲಿ ತೊಡಗಿಸಿಕೊಂಡು ಅದರಲ್ಲೂ ವಿದ್ಯಾರ್ಥಿ ಮತ್ತು ಯುವಜನರಲ್ಲಿ ಸಾಹಿತ್ಯಿಕ, ಸಾಮಾಜಿಕ, ಸಾಂಸ್ಕೃತಿಕ, ಕೌಟುಂಬಿಕ, ಧಾರ್ಮಿಕ ಮೌಲ್ಯಗಳನ್ನು ಬಿತ್ತುವ ನಿಟ್ಟಿನಲ್ಲಿ ಕಳೆದ ಏಳೆಂಟು ವರ್ಷಗಳಿಂದ ಸ್ಥಳೀಯ ಸಂಪನ್ಮೂಲ ವ್ಯಕ್ತಿಗಳನ್ನು ಬಳಸಿಕೊಂಡು ವಿಭಿನ್ನವಾದ ಕಾರ್ಯಕ್ರಮಗಳನ್ನು ಆಯೋಜಿಸಿದ್ದೇವೆ ಎಂದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ರಾಜ್ಯ ಸಹಾಯಕ ಸಂಘಟನಾ ಆಯುಕ್ತೆ ಎಚ್. ಎಂ. ಪ್ರಿಯಾಂಕ ಮಾತನಾಡಿ ಪ್ರತಿವರ್ಷ ಎರಡೂ ಸಂಸ್ಥೆಗಳಿಂದ ಬೇಸಿಗೆ ಶಿಬಿರವನ್ನು ಆಯೋಜನೆ ಮಾಡುತ್ತಿದ್ದು ಹೊಸ ಹೊಸ ಪ್ರತಿಭೆಗಳಿಗೆ ಅವಕಾಶ ಕೊಡುತ್ತಿದ್ದೇವೆ. ಮಕ್ಕಳು ಕೇವಲ ಪಠ್ಯಕ್ಕೆ ಮಾತ್ರ ಸೀಮಿತಗೊಳ್ಳದೇ ಪಠ್ಯೇತರ ಚಟವಟಿಕೆಗಳಲ್ಲಿ ತೊಡಗಿಸಿಕೊಳ್ಳುವಂತೆ ಮಾಡುವುದು ಸರ್ವಾಂಗೀಣ ಬೆಳವಣಿಗೆಗೆ ಸಹಕಾರಿಯಾಗಿದೆ ಎಂದರು.

ವೇದಿಕೆಯಲ್ಲಿ ತಿಪಟೂರು ತಾಲ್ಲೂಕು ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ಅಧ್ಯಕ್ಷೆ ಲತಾಮಣಿ ಎಂ.ಕೆ. ತುರುವೇಕೆರೆ, ಪ್ರತಿಮಾ ಸಾಂಸ್ಕೃತಿಕ ಹಾಗೂ ಸಾಮಾಜಿಕ ಟ್ರಸ್ಟಿನ ಸಂಸ್ಥಾಪಕ ಅಧ್ಯಕ್ಷೆ ಎಚ್.ಎಸ್. ಪ್ರತಿಮಾ, ಯೋಗಶಿಕ್ಷಕಿ ಗಿರಿಜಾ ನಿರ್ವಾಣಿ, ಗೈಡ್ ಕ್ಯಾಪ್ಟನ್ ಅಶ್ವಿನಿ ಭೈರಾಪುರ, ಗೈಡ್ ಕ್ಯಾಪ್ಟನ್ ಶ್ರೀ, ಲೇಡಿ ಸ್ಕೌಟ್ ಮಾಸ್ಟರ್ ರೇಣುಕಾ ಭೈರಾಪುರ, ಜಿಲ್ಲಾ ಖಜಾಂಚಿ ಆರ್.ಎಸ್. ರಮೇಶ್ ಸೇರಿದಂತೆ 50 ಕ್ಕೂ ಹೆಚ್ಚು ಶಿಬಿರಾರ್ಥಿಗಳು ಹಾಜರಿದ್ದರು.

# ಎಂಟನೇ ದಿನಕ್ಕೆ ಕಾಲಿಟ್ಟ ರೈತ ಸಂಘದ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಆಶ್ರಯ ಯೋಜನೆಯಡಿ ವಿತರಿಸಲಾದ ಹಕ್ಕುಪತ್ರ ಹೊಂದಿರುವ ಮನೆಗಳನ್ನು ಕಾನೂನುಬಾಹಿರವಾಗಿ ಧ್ವಂಸಗೊಳಿಸಿರುವುದನ್ನು ಖಂಡಿಸಿ ಹಾಗೂ ಸೂಕ್ತ ಪರಿಹಾರ ಮತ್ತು ಪುನರ್ವಸತಿಗೆ ಆಗ್ರಹಿಸಿ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ರೈತ ಸಂಘ ಹಮ್ಮಿಕೊಂಡಿರುವ ಪ್ರತಿಭಟನೆ ಎಂಟನೇ ದಿನಕ್ಕೆ ಕಾಲಿಟ್ಟಿದೆ.

ರೈತ ಸಂಘದ ಜಿಲ್ಲಾಧ್ಯಕ್ಷ ಬಾಬು ಅವರು ಮಾತನಾಡಿ, "ಅರಕಲಗೂಡು ತಾಲ್ಲೂಕಿನ ಎಬಿಎಂ ಹಳ್ಳಿಯ ನಿವಾಸಿಗಳಿಗೆ 1991-92ರಲ್ಲಿ ತಹಶೀಲ್ದಾರ್ ಅವರು ಆಶ್ರಯ ಯೋಜನೆಯಡಿ ಅಧಿಕೃತವಾಗಿ ನಿವೇಶನಗಳನ್ನು ಹಂಚಿಕೆ ಮಾಡಿದ್ದರು. ಈ ಹಕ್ಕುಪತ್ರಗಳ ಆಧಾರದ ಮೇಲೆ ದಶಕಗಳಿಂದ ವಾಸಿಸುತ್ತಿರುವ ಬಡ ಕುಟುಂಬಗಳ ಮನೆಗಳನ್ನು ಈಗ ಅಕ್ರಮವಾಗಿ ಧ್ವಂಸ ಮಾಡಲಾಗುತ್ತಿದೆ," ಎಂದು ಆಕ್ರೋಶ ವ್ಯಕ್ತಪಡಿಸಿದರು.



ಸ್ಥಳೀಯ ಜನಪ್ರತಿನಿಧಿಗಳ ಒತ್ತಡಕ್ಕೆ ಮಣಿದಿರುವ ತಾಲ್ಲೂಕು ಆಡಳಿತವು, ಯಾವುದೇ ಪೂರ್ವ ನೋಟಿಸ್ ನೀಡದೆ ಹಾಗೂ ಕಾನೂನು ಪ್ರಕ್ರಿಯೆಗಳನ್ನು ಅನುಸರಿಸದೆ ಏಕಾಏಕಿ ಮನೆಗಳನ್ನು ಕೆಡವಿ ಹಾಕಿದೆ. ಜಾಗದ ಸರಿಯಾದ ಅಳತೆ ಮಾಡದೆ ನಿಜವಾದ ಹಕ್ಕುದಾರರಿಗೆ ತೊಂದರೆ ನೀಡಲಾಗುತ್ತಿದೆ. ಇದು ಮೂಲಭೂತ ಹಕ್ಕುಗಳ ಮೇಲಿನ ದಾಳಿಯಾಗಿದ್ದು, ಅತಿಕ್ರಮಣಕಾರರ ವಿರುದ್ಧ ಕ್ರಮ ಕೈಗೊಳ್ಳುವ ಬದಲು ಬಡವರಿಗೆ ಅನ್ಯಾಯ ಮಾಡಲಾಗುತ್ತಿದೆ ಎಂದು ಅವರು ಗಂಭೀರವಾಗಿ ಆರೋಪಿಸಿದರು.

# ಉದ್ಯೋಗ ಪಡೆಯಲು ಪದವಿ ಜೊತೆಗೆ ತರಬೇತಿಯೂ ಅವಶ್ಯಕ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: "ಇಂದಿನ ತೀವ್ರ ಸ್ಪರ್ಧಾತ್ಮಕ ಯುಗದಲ್ಲಿ ಕೇವಲ ಪದವಿ ಪ್ರಮಾಣಪತ್ರ ಪಡೆದರೆ ಸಾಕಾಗುವುದಿಲ್ಲ. ವಿದ್ಯಾರ್ಥಿಗಳು ವ್ಯಾಸಂಗದ ಅವಧಿಯಲ್ಲೇ ತಾಂತ್ರಿಕ ಹಾಗೂ ಪ್ರಾಯೋಗಿಕ ತರಬೇತಿ ಪಡೆಯುವುದು ಉದ್ಯೋಗಾವಕಾಶಗಳ ದೃಷ್ಟಿಯಿಂದ ಅತ್ಯಗತ್ಯ," ಎಂದು ಮಲೆನಾಡು ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರಾದ ಡಾ. ಎಚ್. ಜೆ. ಅಮರೇಂದ್ರ ತಿಳಿಸಿದರು.

ನಗರದ ಮಲೆನಾಡು ಇಂಜಿನಿಯರಿಂಗ್ ಕಾಲೇಜಿನ ಕಂಪ್ಯೂಟರ್ ಸೈನ್ಸ್ ಅಂಡ್ ಇಂಜಿನಿಯರಿಂಗ್ ವಿಭಾಗದಲ್ಲಿ ಗುರುವಾರ ಹಮ್ಮಿಕೊಳ್ಳಲಾಗಿದ್ದ ಐಇಇಇ ಸ್ಟೂಡೆಂಟ್ ಚಾಪ್ಟರ್ ಉದ್ಘಾಟಿಸಿ ಮಾತನಾಡಿದ ಅವರು, "ವಿದ್ಯಾರ್ಥಿಗಳು ಪಠ್ಯಕ್ರಮದ ಜ್ಞಾನದ ಜೊತೆಗೆ ಉದ್ಯೋಗ ಮಾರುಕಟ್ಟೆಯ ಇಂದಿನ ಅಗತ್ಯಕ್ಕೆ ತಕ್ಕಂತೆ ಕೌಶಲ್ಯಗಳನ್ನು ಬೆಳೆಸಿಕೊಳ್ಳಬೇಕು. ಇಂತಹ ಸ್ಟೂಡೆಂಟ್ ಚಾಪ್ಟರ್‌ಗಳು ವಿದ್ಯಾರ್ಥಿಗಳಿಗೆ ಕೈಗಾರಿಕಾ ಕ್ಷೇತ್ರದ ಬೇಡಿಕೆಗಳ ಬಗ್ಗೆ ಸ್ಪಷ್ಟ ಅರಿವು ಮೂಡಿಸುತ್ತವೆ," ಎಂದರು.

ವಿಭಾಗದ ಮುಖ್ಯಸ್ಥರಾದ ಡಾ. ಚಂದ್ರಿಕಾ ಜೆ. ಮಾತನಾಡಿ, "ಐಇಇಇ ಸ್ಟೂಡೆಂಟ್ ಚಾಪ್ಟರ್ ಅಡಿಯಲ್ಲಿ ವರ್ಷಪೂರ್ತಿ ವಿಶೇಷ ತರಬೇತಿ ಕಾರ್ಯಕ್ರಮಗಳು, ತಾಂತ್ರಿಕ ಕಾರ್ಯಾಗಾರಗಳು ಹಾಗೂ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುವುದು. ವಿದ್ಯಾರ್ಥಿಗಳು ಇವುಗಳನ್ನು ಸದ್ಬಳಕೆ ಮಾಡಿಕೊಂಡು ತಮ್ಮ ವ್ಯಕ್ತಿತ್ವ ವಿಕಸನ ಮಾಡಿಕೊಳ್ಳಬೇಕು," ಎಂದು ಕರೆ ನೀಡಿದರು.

ಐಇಇಇ ಬ್ರ್ಯಾಂಚ್ ಕೌನ್ಸಿಲ್ ಮುಖ್ಯಸ್ಥರಾದ ಡಾ. ಪಿ.ಸಿ. ಶ್ರೀಕಾಂತ್ ಮಾತನಾಡಿ, "ಐಇಇಇ ಸಂಸ್ಥೆಯು ಹನಿವೆಲ್, ಗೂಗಲ್, ಮೈಕ್ರೋಸಾಫ್ಟ್‌ನಂತಹ ಜಾಗತಿಕ ಕಂಪನಿಗಳೊಂದಿಗೆ ನಿಕಟ ಒಡನಾಟ ಹೊಂದಿದೆ. ಈ ವೇದಿಕೆಯಲ್ಲಿ ಸಕ್ರಿಯರಾಗಿರುವ ವಿದ್ಯಾರ್ಥಿಗಳಿಗೆ ಉನ್ನತ ಕಂಪನಿಗಳಲ್ಲಿ ಉದ್ಯೋಗ ದೊರೆಯುವುದಲ್ಲದೆ, ನಾಯಕತ್ವದ ಗುಣಗಳನ್ನು ಬೆಳೆಸಿಕೊಳ್ಳಲು ಉತ್ತಮ ಅವಕಾಶ ಸಿಗಲಿದೆ," ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಹಿರಿಯ ಪ್ರಾಧ್ಯಾಪಕ ಡಾ. ಬಿ. ರಮೇಶ್, ಐಇಇಇ ಸ್ಟೂಡೆಂಟ್ ಚಾಪ್ಟರ್ ಸಲಹೆಗಾರ ಶ್ರೀ ತೇಜೋನಿಧಿ ಎಂ.ಆರ್, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಮತ್ತು ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಗ್ರಾಮದಿಂದ ಜಾಗತಿಕ ಮಟ್ಟಕ್ಕೆ

## ಪ್ರೈಡ್ ಕಾಲೇಜು ವಿದ್ಯಾರ್ಥಿನಿಯರ ಐತಿಹಾಸಿಕ ಸಾಧನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**





ಹಾಸನ: ನಗರದ ಪ್ರತಿಷ್ಠಿತ 'ಪ್ರೈಡ್ ಪಿಯು ಮತ್ತು ಪದವಿ ಕಾಲೇಜಿನ' ವಿದ್ಯಾರ್ಥಿನಿಯರು ಜಾಗತಿಕ ಮಟ್ಟದ ವೃತ್ತಿಪರ ಕೋರ್ಸ್ ಆದ 'ಯುಎಸ್ ಸಿಎಂಎ' ಪರೀಕ್ಷೆಯಲ್ಲಿ ಅಪ್ರತಿಮ ಸಾಧನೆ ಮಾಡುವ ಮೂಲಕ ಹಾಸನ ಜಿಲ್ಲೆಯ ಕೀರ್ತಿ ಪತಾಕೆಯನ್ನು ಹಾರಿಸಿದ್ದಾರೆ.

ಯುಎಸ್ ಸಿಎಂಎ ಕೋರ್ಸ್ ವಿಶ್ವದ 150ಕ್ಕೂ ಹೆಚ್ಚು ರಾಷ್ಟ್ರಗಳಲ್ಲಿ ಮಾನ್ಯತೆ ಹೊಂದಿದೆ. ಇದು ಪ್ರಮುಖವಾಗಿ ಆರ್ಥಿಕ ಯೋಜನೆ ವಿಶ್ಲೇಷಣೆ ಮತ್ತು ತಂತ್ರಾತ್ಮಕ ನಿರ್ಧಾರಗಳನ್ನು ತೆಗೆದುಕೊಳ್ಳುವಲ್ಲಿ ಪರಿಣತಿಯನ್ನು ಒದಗಿಸುತ್ತದೆ. ಭಾರತೀಯ ಸಿಎಂಎ ತೆರಿಗೆ ಮತ್ತು ವೆಚ್ಚ ನಿರ್ವಹಣೆಗೆ ಸೀಮಿತವಾಗಿದ್ದರೆ, ಯುಎಸ್ ಸಿಎಂಎ ಜಾಗತಿಕ ಕಂಪನಿಗಳಲ್ಲಿ ಉನ್ನತ ಮಟ್ಟದ ಉದ್ಯೋಗಾವಕಾಶಗಳಿಗೆ ಹೆಬ್ಬಾಗಿಲು ತೆರೆಯುತ್ತದೆ. ವಿದ್ಯಾರ್ಥಿನಿಯರಾದ ವರ್ಷಾ ಮತ್ತು ಡಿಂಪಲ್ ಅವರ ನಿರಂತರ ಪರಿಶ್ರಮ, ದೃಢ ಸಂಕಲ್ಪ ಹಾಗೂ ಕಾಲೇಜಿನ ಅನುಭವೀ ಶಿಕ್ಷಕರ ಮಾರ್ಗದರ್ಶನದಿಂದಾಗಿ ಈ ಐತಿಹಾಸಿಕ ಸಾಧನೆ ಸಾಧ್ಯವಾಗಿದೆ.


### ಸಾಧಕ ವಿದ್ಯಾರ್ಥಿನಿಯರು ವರ್ಷಾ ಮತ್ತು ಡಿಂಪಲ್

- **ಸಾಧನೆ:** ಜಾಗತಿಕ ಮಟ್ಟದ ಪ್ರತಿಷ್ಠಿತ ಯುಎಸ್ ಸಿಎಂಎ ಪರೀಕ್ಷೆ-1 ಮತ್ತು ಪರೀಕ್ಷೆ-2ರಲ್ಲಿ ಅಭೂತಪೂರ್ವ ಯಶಸ್ಸು.
- **ವಿಶೇಷತೆ:** ಹಾಸನ ಜಿಲ್ಲೆಯಲ್ಲಿ ಈ ಸಾಧನೆ ಮಾಡಿದ ಮೊದಲ ವಿದ್ಯಾರ್ಥಿನಿಯರು ಎಂಬ ಹೆಗ್ಗಳಿಕೆ.
- **ಕೋರ್ಸ್ ಮಹತ್ವ:** 150ಕ್ಕೂ ಹೆಚ್ಚು ದೇಶಗಳಲ್ಲಿ ಮಾನ್ಯತೆ ಪಡೆದ ಜಾಗತಿಕ ಅರ್ಹತೆ.

ಗ್ರಾಮೀಣ ಮತ್ತು ನಗರ ಭಾಗದ ವಿದ್ಯಾರ್ಥಿಗಳಿಗೆ ಜಾಗತಿಕ ಮಟ್ಟದ ಗುಣಮಟ್ಟದ ಶಿಕ್ಷಣ ನೀಡುತ್ತಿರುವ ಕಾಲೇಜಿನ ಶೈಕ್ಷಣಿಕ ಗುಣಮಟ್ಟಕ್ಕೆ ಈ ಯಶಸ್ಸು ಸಾಕ್ಷಿಯಾಗಿದೆ.

"ಹಾಸನ ಜಿಲ್ಲೆಯಲ್ಲೇ ಈ ಸಾಧನೆ ಮಾಡಿದ ಮೊದಲ ವಿದ್ಯಾರ್ಥಿನಿಯರು ನಮ್ಮ ಕಾಲೇಜಿನವರು ಎಂಬುದು ಹೆಮ್ಮೆಯ ವಿಷಯ. ಇವರ ಸಾಧನೆ ಇತರೆ ವಿದ್ಯಾರ್ಥಿಗಳಿಗೆ ಸ್ಫೂರ್ತಿಯಾಗಲಿ," ಎಂದು ಕಾಲೇಜಿನ ಆಡಳಿತ ಮಂಡಳಿಯು ವಿದ್ಯಾರ್ಥಿನಿಯರನ್ನು ಅಭಿನಂದಿಸಿ, ಉಜ್ವಲ ಭವಿಷ್ಯಕ್ಕಾಗಿ ಹಾರೈಸಿದೆ.

# ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ನುಗ್ಗೇಹಳ್ಳಿ: ಹೋಬಳಿಯ ಅಕ್ಕನಹಳ್ಳಿ ವೃತ್ತದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಅಕ್ಕನಹಳ್ಳಿ ಗ್ರಾಮದ ಜೆಡಿಎಸ್ ಬೆಂಬಲಿತ ಅಭ್ಯರ್ಥಿ ಎ.ಎಂ. ಕಿಶೋರ್ ಗುರುವಾರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಎಸ್. ಎಂ. ಮಧು ಅವರ ರಾಜೀನಾಮೆಯಿಂದ ತೆರವಾದ ಸ್ಥಾನಕ್ಕೆ ನಡೆದ ಚುನಾವಣಾ ಪ್ರಕ್ರಿಯೆಯಲ್ಲಿ ನಾಮಪತ್ರ ಸಲ್ಲಿಸಿದ್ದರಿಂದ ಚುನಾವಣಾ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ ವಿಜಯ್ ಕುಮಾರ್ ಅವರು ಅವಿರೋಧ ಆಯ್ಕೆ ಘೋಷಿಸಿದರು.

ನೂತನ ಅಧ್ಯಕ್ಷ ಎ.ಎಂ. ಕಿಶೋರ್ ಮಾತನಾಡಿ ಅಕ್ಕನಹಳ್ಳಿ ಕೃಷಿ ಪತ್ತಿನ ಸಹಕಾರ ಸಂಘದ ವ್ಯಾಪ್ತಿಯಲ್ಲಿ ಪಹಣಿ ಹೊಂದಿರುವ ರೈತರು ಹಾಗೂ ಎಲ್ಲಾ ಹಳ್ಳಿಗಳ ಶ್ರೀ ಶಕ್ತಿ ಸಂಘಗಳಿಗೆ ಶಾಸಕ ಸಿ.ಎನ್. ಬಾಲಕೃಷ್ಣ ಅವರ ಸಹಕಾರದಿಂದ ಬಡ್ಡಿ ರಿಯಾಯಿತಿ ಸಾಲ ಕೊಡಿಸುವ ಮೂಲಕ ಅಕ್ಕನಹಳ್ಳಿ ಕೃಷಿ ಪತ್ತಿನ ಸಹಕಾರ ಸಂಘವನ್ನು ಮಾದರಿ ಮಾಡುವುದಾಗಿ ತಿಳಿಸಿದರು. ಕಾರ್ಯಕ್ರಮದಲ್ಲಿ ಕಾರ್ಯನಿರ್ವಹಣಾಧಿಕಾರಿ ಎ. ಟಿ. ರವಿ, ಉಪಾಧ್ಯಕ್ಷೆ ನಂಜಮ್ಮ, ಮುಖಂಡರುಗಳಾದ ಎಚ್‌ಎಮ್. ನಟರಾಜ್, ತೋಟಿ ನಾಗರಾಜ್, ಬಿ. ಆರ್. ದೊರೆಸ್ವಾಮಿ, ಎಸ್. ಪಿ. ನವೀನ್ ಕುಮಾರ್, ಎಸ್. ಜೆ. ವಾಸುದೇವ್, ವಿಕ್ಟರ್, ಕೃಪಾಶಂಕರ್, ಉದ್ಯಮಿ ಜಗದೀಶ್, ಅಕ್ಕನಹಳ್ಳಿ ಎ. ಇ. ಮಲ್ಲೇಗೌಡ, ಪುಟ್ಟರಾಜು, ಮಾದಲಗೆರೆ ಎಂ.ಎಂ. ದಿಲೀಪ್, ಮಾವಿನಹಳ್ಳಿ ಸುರೇಶ್, ಮಧು, ತೋಟಿ ಮಂಜು, ಸೋಸಲಗೆರೆ (ಗನ್ನಿ) ಕುಮಾರ್, ಜೆಸಿಪಿ ಗಣೇಶ್, ಅಕ್ಕನಹಳ್ಳಿ ವೆಂಕಟೇಶಣ್ಣ, ನಂಜೇಗೌಡ, ಶರತ್ ಕುಮಾರ್, ನಟರಾಜ್, ಹೊನ್ನೇಗೌಡ, ಸದಸ್ಯರುಗಳಾದ ದಿನೇಶ್, ಗೋಪಾಲಗೌಡ, ಮಂಜೇಗೌಡ, ಸುಜಾತ, ಹೊನ್ನೇಗೌಡ, ಹರ್ಷಿಣಿ, ಯತೀಶ್, ಪ್ರಕಾಶ್, ಇತರರು ಹಾಜರಿದ್ದರು.

# ಸಾವಿತ್ರಿಬಾಯಿ ಮತ್ತು ಜ್ಯೋತಿಬಾ ಪುಲೆ ಜೀವನಾಧಾರಿತ ನಾಟಕ ಸರಸತಿಯಾಗಲೊಲ್ಲೆ

**ಗೊರೂರು ಅನಂತರಾಜು, ಹಾಸನ.**



ನಾಟ್ಯ ವೈಭವ ಹಾಸನ, ರಂಗಸಿರಿ, ಹಾಸನ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಹಾಸನಾಂಬ ಕಲಾಕ್ಷೇತ್ರದಲ್ಲಿ ಮೂರು ದಿನ ನಾಲ್ಕು ನಾಟಕಗಳು ಪ್ರದರ್ಶನಗೊಂಡವು. ಏಪ್ರಿಲ್ 14ರಂದು ಜ್ಞಾನಧಾರ ಪ್ಯಾರಾ ಮೆಡಿಕಲ್ ಕಾಲೇಜು ವಿದ್ಯಾರ್ಥಿಗಳು ಕೋಟಿಗಾನಹಳ್ಳಿ ರಾಮಯ್ಯ ರಚನೆಯ ನನ್ನ ಅಂಬೇಡ್ಕರ್ ನಾಟಕವನ್ನು ಬಾಬಾಸಾಹೇಬ್ ಕಾಂಬಳೆ ಸಂಗೀತ ನಿರ್ದೇಶನದಲ್ಲಿ ಪ್ರದರ್ಶಿಸಿದರು. ಏ.15ರ ಬೆಳಿಗ್ಗೆ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ವಿದ್ಯಾರ್ಥಿನಿಯರು ಮೂಲ ನಿಕೊಲಾಯ್ ಗೋಗೋಲ್ ಕನ್ನಡ ರೂಪ ಸಂಗೀತ ನಿರ್ದೇಶನ ಧನಂಜಯ ದಿಯಾನ್ ಮತ್ತು ಅಂದೇ ಮಧ್ಯಾಹ್ನ ಸಕಲೇಶಪುರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ವಿದ್ಯಾರ್ಥಿಗಳು ಡಾ.ಎಂ.ಬೈರೇಗೌಡ ರಚನೆಯ ಸರಸತಿಯಾಗಲೊಲ್ಲೆ ನಾಟಕವನ್ನು ಪ್ರದರ್ಶಿಸಿದರು. ಏ.16ರ ಬೆಳಿಗ್ಗೆ ಸಂಟ್ರಲ್ ಕಾಮರ್ಸ್ ಕಾಲೇಜು ವಿದ್ಯಾರ್ಥಿಗಳು ಹಾಸನದ ಪ್ರಕಾಶ್ ಜಿ. ಅವರ ಕಾದಂಬರಿ ನನ್ಸಿರಿ ಆದರಿಸಿ ಧನಂಜಯ ದಿಯಾನ್ ಅವರ ರಂಗರೂಪ, ಸಂಗೀತ ಮತ್ತು ನಿರ್ದೇಶನದಲ್ಲಿ ಪ್ರದರ್ಶಿಸಿದರು. ಸರಸತಿಯಾಗಲೊಲ್ಲೆ ಇದು ಸಾವಿತ್ರಿಬಾಯಿ ಪುಲೆ ಮತ್ತು ಇವರ ಪತಿ ಜ್ಯೋತಿಬಾ ಅವರ ಜೀವನಾಧಾರಿತ ನಾಟಕ. ಸಾಮಾನ್ಯವಾಗಿ ಇಂತಹ ಜೀವನಾಧಾರಿತ ನಾಟಕಗಳು ರಂಗದ ಮೇಲೆ ನಿರೂಪಕ ಅಥವಾ ಸೂತ್ರದಾರಿ ಮೇಳದ ಮೂಲಕ ಅನಾವರಣಗೊಳ್ಳುತ್ತವೆ. ಇಬ್ಬರೂ ನಿರೂಪಕಿಯರ ನಿರೂಪಣೆಯಲ್ಲಿ ಮಹಾರಾಷ್ಟ್ರದ ಸತಾರಾ ಜಿಲ್ಲೆಯ ನೈಗಾಂವ್ ನಲ್ಲಿ ಸಾವಿತ್ರಿ ಬಾಯಿ ಅವರು 1831 ಜನವರಿ 3ರಂದು ಜನಿಸಿದರೆಂದು ತಿಳಿಯುತ್ತದೆ. ಬಾಲ್ಯ ವಿವಾಹ ರೂಡಿಯಲ್ಲಿದ್ದ ಅಂದಿನ ದಿನಗಳಲ್ಲಿ ತಮ್ಮ 9ನೇ ವಯಸ್ಸಿಗೆ 13 ವರ್ಷದ ಜ್ಯೋತಿರಾವ್ ಪುಲೆ ಅವರನ್ನು ವಿವಾಹವಾಗುತ್ತಾರೆ. ಇಲ್ಲಿಂದ ನಾಟಕದಲ್ಲಿ ದೃಶ್ಯಗಳು ತೆರೆದುಕೊಳ್ಳುತ್ತವೆ. ಹೆಣ್ಣು ಗಂಡು ನೋಡುವ ಶಾಸ್ತ್ರದ ನಂತರ ಮಾತುಕತೆಗೆ ಕೂರುತ್ತಾರೆ. ಹುಡುಗಿಗೆ 50 ರೂ. ತೆರ ಕೊಡುವುದಾಗಿ ವರನ ತಂದೆ ಹೇಳಲು ಸಾಲುವುದಿಲ್ಲ ನೂರು ರೂ. ಕೊಡಿ ಎಂದು ವಧುವಿನ ತಂದೆ ಹೇಳುತ್ತಾರೆ. ಇದನ್ನು ವಿರೋದಿಸಿ ಎದ್ದು ನಿಲ್ಲುವ ಮಗ ಜ್ಯೋತಿಬಾ ಪುಲೆ ಮಹಾರಾಷ್ಟ್ರದ ಸತಾರಾ ಜಿಲ್ಲೆಯ ಕಟ್ಗುನ್ ನಲ್ಲಿ ಗೋವಿಂದರಾವ್ ಜಿಮ್ನಾಬಾಯಿ ದಂಪತಿಗಳ ಸುಪುತ್ರರು. ಪುಣೆಯ ಸ್ಕಾಟಿಷ್ ಮಿಷನ್ ಹೈಸ್ಕೂಲ್ ನಲ್ಲಿ ಶಿಕ್ಷಣ ಪಡೆದವರು. ಪಾಶ್ಚಿಮಾತ್ಯ ಚಿಂತಕ ಥಾಮಸ್ ಪೇನ್ ಅವರ ವಿಚಾರಗಳಿಂದ ಪ್ರಭಾವಿತರಾಗಿದ್ದವರು. ಮದುವೆ ನಂತರ ಸಾವಿತ್ರಿಬಾಯಿ ಅವರಿಗೆ ಗಂಡನ ಮನೆಯೇ ಮೊದಲ ಪಾಠಶಾಲೆ. ಪತಿ ಜ್ಯೋತಿಬಾ ಅವರೇ ಗುರುಗಳು. 1847ರಲ್ಲಿ ಸಾವಿತ್ರಿಬಾಯಿ ಶ್ರೀಮತಿ ಮಿಚಲ್ ಅವರ ನಾರ್ಮಲ್ ಶಾಲೆಯಲ್ಲಿ ಶಿಕ್ಷಕಿಯ ತರಬೇತಿ ಪಡೆದಾಗ ಅವರಿಗೆ 17 ವರ್ಷ. ಮಹಾರಾಷ್ಟ್ರದಲ್ಲಿ ತರಬೇತಿ ಆದ ಮೊದಲ ಶಿಕ್ಷಕಿ ಇವರು. ಈ ಪಾಠಶಾಲೆಗಳ ಆಡಳಿತದ ಜವಾಬ್ದಾರಿಯೂ ಇವರದೆ ಆಗಿತ್ತು. ಈ ದಂಪತಿಗಳು 1848ರಲ್ಲಿ ಪುಣೆಯ ಭಿಡೆವಾಡಾದಲ್ಲಿ ಹೆಣ್ಣುಮಕ್ಕಳಿಗಾಗಿ ಮೊದಲ ಶಾಲೆಯನ್ನು ಪ್ರಾರಂಭಿಸಿದರು. ಮೇಲ್ವರ್ಗದ ಕಡು ವಿರೋಧದ ನಡುವೆಯೂ ಮಣ್ಣು, ಸಗಣಿ ಎಸೆಯಲ್ಪಟ್ಟರೂ ಧೃತಿಗೆಡದೆ ಶಿಕ್ಷಣ ನೀಡಿದವರು ಸಾವಿತ್ರಿಬಾಯಿ ಪುಲೆ ಭಾರತದ ಮಹಿಳೆಯರಿಗೆ ಸಮಾಜದ ಎಲ್ಲಾ ಕ್ಷೇತ್ರದಲ್ಲಿ ಸಮಾನತೆಯ ಹಕ್ಕಿದೆ ಎಂದು ಪ್ರತಿಪಾದಿಸಿದವರು. ಈ ದಿಸೆಯಲ್ಲಿ ಸಮಾನತೆಯ ಸಂದೇಶದ ಹಾಡು ಸಾರವತ್ತಾಗಿತ್ತು. ಸಮಾಜದ ಅನಿಷ್ಠ ಪದ್ಧತಿಗಳಾದ ಬಾಲ್ಯ ವಿವಾಹ, ಸತಿಸಹಗಮನ ಪದ್ಧತಿ, ಕೇಶ ಮುಂಡನೆ ವಿರುದ್ಧ ಹೋರಾಡಿದ ಮತ್ತು ಮಹಿಳೆಯರಿಗೋಸ್ಕರ ಪ್ರಥಮವಾಗಿ ಶಾಲೆ, ಅಬಲಾಶ್ರಮ ಸ್ಥಾಪನೆ ಮಾಡಿದ ಕೀರ್ತಿ ಇವರದು. ಬ್ರಿಟಿಷ್ ಸರಕಾರ ಸಾವಿತ್ರಿಬಾಯಿ ಅವರಿಗೆ ಇಂಡಿಯಾಸ್ ಫಸ್ಟ್ ಲೇಡಿ ಟೀಚರ್ ಎಂಬ ಬಿರುದು ನೀಡಿತ್ತೆಂಬುದು ಗಮನಾರ್ಹ. 1888ರಲ್ಲಿ ಮುಂಬೈನ ಸಭೆಯೊಂದರಲ್ಲಿ ವಿಠಲರಾವ್ ಕೃಷ್ಣಾಜಿ ವಂದೇಕರ್ ಅವರು ಜ್ಯೋತಿಬಾ ಪುಲೆ ಅವರಿಗೆ ಮಹಾತ್ಮ ಅರ್ಥಾತ್ ಮಹಾನ್ ಆತ್ಮ ಎಂಬ ಬಿರುದು ನೀಡಿದ್ದು ಸ್ಮರಣಾರ್ಹ. ಜ್ಯೋತಿಬಾ ಅವರು 1890 ನವೆಂಬರ್ 28ರಂದು ಪುಣೆಯಲ್ಲಿ ನಿಧನರಾದರು. 1897ರಲ್ಲಿ ಪುಣೆಯಲ್ಲಿ ಪ್ಲೇಗ್ ರೋಗಿಗಳಿಗೆ ಚಿಕಿತ್ಸೆ ನೀಡುವಾಗ ಸೋಂಕು ತಗುಲಿ ಸಾವಿತ್ರಿಬಾಯಿ ಪುಲೆ ನಿಧನರಾದರು. ಇವರೀರ್ವರ ಜೀವನ ಚರಿತ್ರೆಯು ಕಥಾ ನಿರೂಪಣಾ ತಂತ್ರಗಾರಿಕೆಯಲ್ಲಿ ವೈ ಮಂಜುನಾಥ ಸಿರಿಗೇರಿ ಅವರ ನಿರ್ದೇಶನದಲ್ಲಿ ಯಶಸ್ವಿಯಾಗಿ ರಂಗದ ಮೇಲೆ ಮೂಡಿಬಂತು. ನಿರ್ದೇಶಕರು ಬಳ್ಳಾರಿ ಜಿಲ್ಲೆ ಸಿರುಗುಪ್ಪ ತಾ. ಸಿರಿಗೇರಿ ಗ್ರಾಮದವರು. ನೀನಾಸಂ ಪದವಿ ಪಡೆದು ಜನಮನದಾಟ ಮೈಸೂರು ರಂಗಾಯಣ, ನೀನಾಸಂ ತಿರುಗಾಟದಲ್ಲಿ ನಟರಾಗಿ ಈಗ ನಿರ್ದೇಶಕರಾಗಿ ಹಾಸನದಲ್ಲಿ ಪ್ರಥಮ ಬಾರಿಗೆ ಕಾಲೇಜು ವಿದ್ಯಾರ್ಥಿಗಳಿಗೆ ನಾಟಕ ಕಲಿಸಿ ರಂಗದ ಮೇಲೆ ತಂದಿದ್ದಾರೆ. ನಾಟಕದ ಎರಡು ಕೇಂದ್ರ ಪಾತ್ರಗಳು ಜ್ಯೋತಿಬಾಪುಲೆ ಪಾತ್ರದಲ್ಲಿ ವಿಶ್ವಾಸ್ ಸ್ಪಷ್ಟ ಮಾತುಗಾರಿಕೆಯಲ್ಲಿ ಭವಿಷ್ಯದ ಕಲಾವಿದರಾಗಿ ವಿಶ್ವಾಸ ಮೂಡಿಸಿದರು. ಸಾವಿತ್ರಿಬಾಯಿ ಪುಲೆ ಪಾತ್ರದಲ್ಲಿ ಪೀತಿ ಸಂಜನಾ ಅಭಿನಯದಲ್ಲಿ ವಿಶ್ವಾಸ ಮೂಡಿಸಿದರು. ಇನ್ನೂ ನಾಟಕದಲ್ಲಿ ಬರುವ ಪೋಷಕ ಪಾತ್ರಗಳು ನಿರೂಪಕ-1 ಮೇಳ ಜನರಾಗಿ ಸಾಂಘವಿ, ನಿರೂಪಕ-2 ಮೇಳ ಜನರಾಗಿ ಪವಿತ್ರ, ಲಕ್ಷ್ಮಿಬಾಯಿಯಾಗಿ ಸುಕನ್ಯ, ಸುಗುಣಬಾಯಿಯಾಗಿ ಸಿಂಚನ, ಖಂಡೋಜಿ ಮತ್ತು ಬ್ರಾಹ್ಮಣನಾಗಿ ಅರುಣ್ ಕುಮಾರ್ ಮತ್ತೋರ್ವ ಬ್ರಾಹ್ಮಣ ಹಾಗೂ ಗೋವಿಂದರಾವ್ ಪಾತ್ರದಲ್ಲಿ ದಿಲನ್ ನಾಟಕವನ್ನು ದಿಲ್ ಖುಷಿಯಲ್ಲಿ ದಡ ಸೇರಿಸಿದರು. ಸಹ ನಿರ್ದೇಶನ ಜಿ.ಎಂ.ವಿಜಯ್ ಕುಮಾರ್ ಸಿರಿಗೇರಿ ಮತ್ತು ಬೆಳಕಿನ ನಿರ್ವಹಣೆ ಅಂಬರೀಶ್ ಸಿರಿಗೇರಿ. ಕಡೆಯಲ್ಲಿ ವೇದಿಕೆ ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರು ಮೇಡಂ ಅವರು ತಮ್ಮ ಕಾಲೇಜು ವಿದ್ಯಾರ್ಥಿಗಳ ಅಭಿನಯವನ್ನು ಮನಸಾರೆ ಶ್ಲಾಘಿಸಿದರು. ನಾನಾದರೂ (ಗೊರೂರು ಅನಂತರಾಜು) ಈ ತೆರೆಯ ಹಿಂದಿನ ಸೂತ್ರದಾರಿ ಶಾಡ್ರಕ್ ಮೇಷ್ಟ್ರನ್ನು ಅವರ ರಂಗನೇಪಥ್ಯದ ಕೆಲಸಗಳನ್ನು ಬಲ್ಲವನಾಗಿ ರಂಗಸಿರಿ ತಂಡ ಹಾಸನದಲ್ಲಿ ರಂಗದ ಮೇಲೆ ತಂದ ನಾಟಕಗಳು ಆ ವಿಮರ್ಶೆಗಳು ನನ್ನ ರಂಗಪ್ರಯೋಗ, ರಂಗಸಿರಿ ಕಥಾ ಐಸಿರಿ ಕೃತಿಗಳಲ್ಲಿ ಇರುವುದನ್ನು ಸ್ಮರಿಸಿದೆನು.

# ಆದಿಚುಂಚನಗಿರಿ ಭೈರವೈಕ್ಯ ಮಂದಿರ ಲೋಕಾರ್ಪಣೆಯ ಐತಿಹಾಸ ಕ್ಷಣ



**ವಿಶ್ವಾಸ್. ಡಿ. ಗೌಡ**

ಕರ್ನಾಟಕದ ಆಧ್ಯಾತ್ಮಿಕ ಪರಂಪರೆಯಲ್ಲಿ ಮಹತ್ವದ ಸ್ಥಾನವನ್ನು ಹೊಂದಿರುವ ಆದಿಚುಂಚನಗಿರಿ ಮಠ ಇಂದು ಮತ್ತೊಂದು ಸುವರ್ಣ ಕ್ಷಣಕ್ಕೆ ಸಾಕ್ಷಿಯಾಗಿದೆ. ಡಾ. ಬಾಲಗಂಗಾಧರನಾಥ ಸ್ವಾಮೀಜಿಗಳ ಐಕ್ಯಸ್ಥಳದಲ್ಲಿ ನಿರ್ಮಾಣಗೊಂಡ ಗುರು ಭೈರವೈಕ್ಯ ಮಂದಿರದ ಲೋಕಾರ್ಪಣೆ, ದೇಶದ ಪ್ರಧಾನಿ ನರೇಂದ್ರ ಮೋದಿ ಅವರಿಂದ ನೆರವೇರಿರುವುದು ಈ ಘಟನೆಯನ್ನು ಇತಿಹಾಸದ ಪುಟಗಳಲ್ಲಿ ಶಾಶ್ವತವಾಗಿ ಅಚ್ಚಳಿಯದಂತೆ ಮಾಡಿದೆ. ಈ ಮಹೋತ್ಸವವು ಕೇವಲ ಧಾರ್ಮಿಕ ಕಾರ್ಯಕ್ರಮವಷ್ಟೇ ಅಲ್ಲ, ಆಧ್ಯಾತ್ಮ ಮತ್ತು ಅಭಿವೃದ್ಧಿಯ ಸಮನ್ವಯದ ಸಂಕೇತವಾಗಿದೆ.

ಸುಮಾರು 80 ಕೋಟಿ ರೂಪಾಯಿ ವೆಚ್ಚದಲ್ಲಿ ದಶಕದ ಕಾಲದ ಪರಿಶ್ರಮದಿಂದ ನಿರ್ಮಿಸಲಾದ ಈ ಮಂದಿರವು ದ್ರಾವಿಡ, ಹೊಯ್ಸಳ, ಚಾಲುಕ್ಯ ಮತ್ತು ಚೋಳರ ಶೈಲಿಗಳ ಸಂಯೋಜನೆಯ ಮೂಲಕ ವೈಶಿಷ್ಟ್ಯತೆಯನ್ನು ಹೊಂದಿದೆ. ಈ ಮಂದಿರವು ಕೇವಲ ಕಟ್ಟಡವಲ್ಲ, ಅದು ಶತಮಾನಗಳ ಸಂಸ್ಕೃತಿ, ಪರಂಪರೆ ಮತ್ತು ಭಕ್ತಿಯ ಪ್ರತಿರೂಪವಾಗಿದೆ. ವಿಶೇಷವಾಗಿ, 71ನೇ ಪೀಠಾಧಿಪತಿಯಾಗಿದ್ದ ಬಾಲಗಂಗಾಧರನಾಥ ಸ್ವಾಮೀಜಿ ಅವರ ಸೇವಾ ಪರಂಪರೆಯನ್ನು ಸ್ಮರಿಸುವ ಉದ್ದೇಶದಿಂದ ನಿರ್ಮಾಣಗೊಂಡಿರುವುದು ಇದರ ಮಹತ್ವವನ್ನು ಇನ್ನಷ್ಟು ಹೆಚ್ಚಿಸಿದೆ.

ಪ್ರಧಾನಿ ಮೋದಿ ಅವರು ಮಠಕ್ಕೆ ಆಗಮಿಸಿದಾಗ ಮೊದಲು ಕಾಲಭೈರವೇಶ್ವರ ಸ್ವಾಮಿಗೆ ಪೂಜೆ ಸಲ್ಲಿಸಿದ್ದು, ಅವರ ಭಕ್ತಿ ಮತ್ತು ಸಂಪ್ರದಾಯದ ಮೇಲಿನ ಗೌರವವನ್ನು ತೋರಿಸುತ್ತದೆ. ಈ ಸಂದರ್ಭದಲ್ಲಿ ಕೇಂದ್ರ ಸಚಿವರಾದ ಎಚ್.ಡಿ. ಕುಮಾರಸ್ವಾಮಿ, ಶೋಭಾ ಕರಂದ್ಲಾಜೆ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಭಕ್ತರ ಅಪಾರ ಸಂಖ್ಯೆಯ ಭಾಗವಹಿಸುವಿಕೆ ಈ ಕಾರ್ಯಕ್ರಮದ ಭವ್ಯತೆಯನ್ನು ಮತ್ತಷ್ಟು ಹೆಚ್ಚಿಸಿತು.

ಮಠದ ಪೀಠಾಧ್ಯಕ್ಷರಾದ ನಿರ್ಮಲಾನಂದನಾಥ ಸ್ವಾಮೀಜಿ ಅವರು ತಮ್ಮ ಭಾಷಣದಲ್ಲಿ ಆಧ್ಯಾತ್ಮದೊಂದಿಗೆ ದೇಶದ ಆರ್ಥಿಕತೆ ಮತ್ತು ಅಭಿವೃದ್ಧಿಯ ಮಹತ್ವವನ್ನು ಒತ್ತಿಹೇಳಿದರು. ಅವರ ಮಾತುಗಳಲ್ಲಿ, ''ಅಭಿವೃದ್ಧಿ ಎಂದರೆ ಕೇವಲ ಮೂಲಸೌಕರ್ಯಗಳ ನಿರ್ಮಾಣವಲ್ಲ, ಅದು ಜನರ ಜೀವನಮಟ್ಟದ ಏರಿಕೆಯಾಗಬೇಕು'' ಎಂಬ ಸಂದೇಶ ಸ್ಪಷ್ಟವಾಗಿತ್ತು. ಈ ಮಾತುಗಳು ದೇಶದ ಮುಂದಿನ ದಿಕ್ಕಿಗೆ ದಾರಿದೀಪವಾಗುವಂತಿವೆ.

ಈ ಸಂದರ್ಭದಲ್ಲಿ ಪ್ರಧಾನಿ ಮೋದಿ ಅವರು ಹಳೆ ಮೈಸೂರು ಪ್ರಾಂತ್ಯದ ವಿಶೇಷ ಆಹಾರವಾದ ರಾಗಿ ಮುದ್ದೆಯ ಮಹತ್ವವನ್ನು ಪ್ರಸ್ತಾಪಿಸಿದರು. ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರ ಜೀವನಶೈಲಿಯನ್ನು ಉದಾಹರಿಸಿ, ರಾಗಿಯ ಪೌಷ್ಟಿಕಾಂಶದ ಮಹತ್ವವನ್ನು ಯುವಜನತೆಗೆ ತಿಳಿಸಿದರು. 94 ವರ್ಷಗಳ ವಯಸ್ಸಿನಲ್ಲಿಯೂ ಸಕ್ರಿಯವಾಗಿರುವ ದೇವೇಗೌಡರ ಆರೋಗ್ಯದ ಹಿಂದೆ ರಾಗಿಯ ಪಾತ್ರವನ್ನು ಅವರು ಪ್ರಶಂಸಿಸಿದರು. ಇದು ನಮ್ಮ ಸ್ಥಳೀಯ ಆಹಾರ ಪದ್ಧತಿಯ ಮಹತ್ವವನ್ನು ಮತ್ತೊಮ್ಮೆ ಸಾಬೀತುಪಡಿಸಿದೆ.

ಕಾರ್ಯಕ್ರಮದ ನಂತರ ನಡೆದ ಸಭೆಯಲ್ಲಿ, ನಾಯಕರು ಮತ್ತು ಧಾರ್ಮಿಕ ಮುಖಂಡರು ಮಾತನಾಡಿ ಬಾಲಗಂಗಾಧರನಾಥ ಸ್ವಾಮೀಜಿಗಳ ಸೇವೆಯನ್ನು ಸ್ಮರಿಸಿದರು. ಸಣ್ಣ ಮಠವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ದ ಅವರ ದೀರ್ಘದೃಷ್ಟಿ ಮತ್ತು ಸಮಾಜಮುಖಿ ಚಟುವಟಿಕೆಗಳು ಎಲ್ಲರಿಗೂ ಮಾದರಿಯಾಗಿದೆ. ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳಲ್ಲಿ ಅವರ ಕೊಡುಗೆ ಅಪಾರವಾಗಿದೆ.

ಈ ಮಹೋತ್ಸವದಲ್ಲಿ ಜನಸಾಗರವೇ ನೆರೆದಿದ್ದು, ''ಮೋದಿ ಮೋದಿ'' ಎಂಬ ಘೋಷಣೆಗಳು ವಾತಾವರಣವನ್ನು ಗರ್ಜಿಸುವಂತೆ ಮಾಡಿತು. ತುಮಕೂರು ಮತ್ತು ಚಿತ್ರದುರ್ಗ ಜಿಲ್ಲೆಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿದ್ದು, ಈ ಕಾರ್ಯಕ್ರಮವನ್ನು ಇನ್ನಷ್ಟು ಐತಿಹಾಸಿಕವಾಗಿಸಿದೆ. ಕಾರ್ಯಕ್ರಮದ ಸಂಘಟನೆಯೂ ಅಚ್ಚುಕಟ್ಟಾಗಿದ್ದು, ಎಲ್ಲರ ಮನಸ್ಸನ್ನು ಗೆದ್ದಿತು.

ಒಟ್ಟಿನಲ್ಲಿ, ಗುರು ಭೈರವೈಕ್ಯ ಮಂದಿರದ ಲೋಕಾರ್ಪಣೆ ಕೇವಲ ಒಂದು ಉದ್ಘಾಟನಾ ಸಮಾರಂಭವಲ್ಲ; ಅದು ನಮ್ಮ ಸಂಸ್ಕೃತಿ, ಭಕ್ತಿ ಮತ್ತು ಅಭಿವೃದ್ಧಿಯ ಒಗ್ಗಟ್ಟಿನ ಪ್ರತಿಬಿಂಬವಾಗಿದೆ. ಆಧ್ಯಾತ್ಮದ ನೆಲೆಯಲ್ಲಿ ಅಭಿವೃದ್ಧಿಯ ಮಾರ್ಗವನ್ನು ತೋರಿಸುವ ಈ ಮಹತ್ವದ ಕ್ಷಣ, ಕರ್ನಾಟಕದ ಜನತೆಗೆ ಹೆಮ್ಮೆ ತರುವುದರೊಂದಿಗೆ, ದೇಶದ ಪ್ರಗತಿಯ ಸಂಕೇತವಾಗಿಯೂ ಉಳಿಯಲಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248